ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **130/2023**

ಪಿ.ಡಬ್ಲ್ಯೂ-**2**
ಸಿ.ಡಬ್ಲ್ಯೂ-**2**

ಸಾಕ್ಷಿಗೆ ದಿನಾಂಕ **21.08.2025** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಸುಧೀರ್
ತಂದೆಯ ಹೆಸರು : ರಾಜಪ್ಪ
ವಯಸ್ಸು : 42 ವರ್ಷ
ಉದ್ಯೋಗ : ವ್ಯವಸಾಯ
ವಾಸಸ್ಥಳ : ನಾಗರಕಟ್ಟೆ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳು ನಮ್ಮ ಮನೆಯ ನೆರೆ ಹೊರೆಯವರು. ಚಾಸಾ-1, 3 ರಿಂದ 5 ರವರ ಪರಿಚಯ ಇರುತ್ತದೆ. ಚಾಸಾ -1 ನನ್ನ ದೊಡ್ಡಪ್ಪನ ಮಗ.

ಮಳೆ ನೀರು ಸಂಗ್ರಹದ ವಿಷಯವಾಗಿ ಆರೋಪಿಗಳು ಮತ್ತು ಚಾಸಾ-1 ರವರ ನಡುವೆ ಜಗಳ ಆಗಿರುತ್ತದೆ. ಪೋಲಿಸರು ಘಟನೆ ನಡೆದ 1 ದಿನದ ನಂತರ ಸ್ಥಳಕ್ಕೆ ಬಂದಿದ್ದು ನನಗೆ ಸಹಿ ಹಾಕುವಂತೆ ತಿಳಿಸಿದ ಮೇರೆಗೆ ನಾನು ಸಹಿ ಹಾಕಿರುತ್ತೇನೆ. ಸಾಕ್ಷಿ ಈಗ ನಿಪಿ-**2** ರ ಕೃತ್ಯ ಸ್ಥಳಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-**2(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3 ರ ಕಚ್ಚಾ ನಕಾಶೆಯಲಿನ ಸಹಿ ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಪಂಚರ ನೋಟೀಸಿನಲ್ಲಿನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-4 ಎಂದು ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಸಹಿಯನ್ನು ಸುಮಾರು 1 ವರ್ಷದ ಹಿಂದೆ ಚಾಸಾ -1 ರವರ ಮನೆ ಹತ್ತಿರ ಮಾಡಿರುತ್ತೇನೆ. ನನ್ನನ್ನು ಉಳಿದು ಚಾಸಾ-1 ಸಹಿ ಮಾಡಿರುತ್ತಾರೆ. ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಮಯ ಮತ್ತು ದಿನಾಂಕ ನನಗೆ ನೆನಪಿಲ್ಲ.

ಪೋಲಿಸರು ಯಾವುದೇ ಜಾಗದ ಪರಿಶೀಲನೆ ಮಾಡಿರುವುದಿಲ್ಲ. ಪೋಲಿಸರು ಯಾವುದೇ ಸ್ವತ್ತನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ</u>

ದಿಃ 02.09.2022 ರಂದು ಪೋಲಿಸರು ಕೃತ್ಯ ಸ್ಥಳಕ್ಕೆ ಬಂದಿರುತ್ತಾರೆ ಎಂದರೆ ನನಗೆ ದಿನಾಂಕ ನೆನಪಿಲ್ಲ. ನಿಪಿ-4 ರಂತೆ ನನಗೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-2 ರಂತೆ ಬೆಳಗ್ಗೆ 10 ರಿಂದ 10.30 ಗಂಟೆ ವರೆಗೆ ಪೋಲಿಸರು ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ . ಕೃತ್ಯ ಸ್ಥಳದಲ್ಲಿ ಚಾಸಾ-1 ರವರು ಹಾಜರು ಮಾಡಿದ ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ . ಸ್ಥಳದಲ್ಲಿ ನಿಪಿ-3 ರಂತೆ ಕಚ್ಚಾ ನಕಾಶೆ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ . ನಿಪಿ-2 ಕ್ಕೆ ನಾನು , ಚಾಸಾ -1, 3 ರವರು ಸ್ಥಳದಲ್ಲಿ ಸಹಿ ಮಾಡಿರುತ್ತೇವೆ ಎಂದರೆ ನನಗೆ ಗೊತ್ತಿಲ್ಲ . ನಾನು ನಿಪಿ-2 ರಂತೆ ಕೃತ್ಯ ಸ್ಥಳ ಮತ್ತು ಅಮಾನತ್ತು ಪಂಚನಾಮೆ ಸಮಯದಲ್ಲಿ ಹಾಜರಿದ್ದು , ಮುದ್ದೆ ಮಾಲು-1 ರ ಕಲ್ಲನ್ನು ಅಮಾನತ್ತುಪಡಿಸಿಕೊಂಡು ಅದಕ್ಕೆ ನಾನು ಸಹಿ ಮಾಡಿದರೂ ಸಹ ಆರೋಪಿ ನಮ್ಮ ನೆರೆ ಮನೆಯವರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ .

<u>ಪಾಟೀ ಸವಾಲುಃ ಆರೋಪಿಗಳ ಪರವಾಗಿ ಶ್ರೀ ಆರ್ ವೈ ವಕೀಲರಿಂದಃ</u>

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸಿರುತ್ತಾರೆ.

ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **130/2023**

ಪಿ.ಡಬ್ಲ್ಯು-**3**
ಸಿ.ಡಬ್ಲ್ಯು-**4**

ಸಾಕ್ಷಿಗೆ ದಿನಾಂಕ **21.08.2025** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಶಾಂತಪ್ಪ
ತಂದೆಯ ಹೆಸರು : ಮಲ್ಲೇಶಪ್ಪ
ವಯಸ್ಸು : 45 ವರ್ಷ
ಉದ್ಯೋಗ : ವ್ಯವಸಾಯ
ವಾಸಸ್ಥಳ : ನಾಗರಕಟ್ಟೆ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳು ನಮ್ಮಗ್ರಾಮಸ್ಥರು. .. ಚಾಸಾ-1 ರಿಂದ 3 ಮತ್ತು 5 ರವರ ಪರಿಚಯ ಇರುತ್ತದೆ.

ಮಳೆ ನೀರು ಸಂಗ್ರಹದ ವಿಷಯವಾಗಿ ಆರೋಪಿಗಳು ಮತ್ತು ಚಾಸಾ-1 ರವರ ನಡುವೆ ಜಗಳ ಆಗಿರುತ್ತದೆ. ನಾನು ಜಗಳ ಆದ ನಂತರ ಹೋಗಿ ನೋಡಲಾಗಿ ಚಾಸಾ -1 ರವರಿಗೆ ಪೆಟ್ಟಾಗಿರುತ್ತದೆ . ಘಟನೆಯು ಸುಮಾರು 2-3 ವರ್ಷಗಳ ಹಿಂದೆ ನಡೆದಿರಬಹುದು ನನಗೆ ದಿನಾಂಕ ನೆನಪಿಲ್ಲ. ಪೋಲಿಸರ ಮುಂದೆ ನಾನು ಘಟನೆಯ ಬಗ್ಗೆ ಹೇಳಿಕೆ ನೀಡಿರುತ್ತೇನೆ.

**(**ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು**)**

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿ: 01.09.2022 ರಂದು ರಾತ್ರಿ 7.00 ಗಂಟೆಗೆ ಗಲಾಟೆ ಆಗಿರುತ್ತದೆ ಎಂದರೆ ಸಾಕ್ಷಿ ಗಲಾಟೆ ಮುಗಿದ ನಂತರ ನಾನು 8.00 ಗಂಟೆಗೆ ಹೋದೇನು ಎಂದು ನುಡಿಯುತ್ತಾರೆ. ಆರೋಪಿಗಳು ಮತ್ತು ಚಾಸಾ-1 ರವರ ನಡುವೆ ಗಲಾಟೆ ಆದ ಸಮಯದಲ್ಲಿ ನಾನು ಹಾಜರಿದ್ದೆನು ಎಂದರೆ ಸರಿಯಲ್ಲ . ಆರೋಪಿಗಳು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ

ನಿಂದಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 1 ನೇ ಆರೋಪಿ ಚಾಸಾ-1 ರವರಿಗೆ ಕಲ್ಲಿನಿಂದ ಹಲ್ಲೆ ಮಾಡಿ ರಕ್ತಗಾಯಪಡಿಸಿರುತ್ತಾರೆ ಎಂದರೆ ಸಾಕ್ಷಿ ತಾನು ಗಾಯವಾದ ಬಗ್ಗೆ ಆಸ್ಪತ್ರೆಗೆ ಹೋಗಿ ನೋಡಿರುತ್ತೇನೆ ಎಂದು ನುಡಿಯುತ್ತಾರೆ. 2 ನೇ ಆರೋಪಿ ಚಾಸಾ-1 ರವರಿಗೆ ಕೈ ಕಾಲುಗಳಿಂದ ಹಲ್ಲೆ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ . ನಾನು ಮತ್ತು ಚಾಸಾ-5 ಗಲಾಟೆ ಬಿಡಿಸಿರುತ್ತೇವೆ ಎಂದರೆ ಸಾಕ್ಷಿ ಪುನಃ ಗಲಾಟೆ ಆದ ನಂತರ ನಾವು ಹೋಗಿರುತ್ತೇವೆ ಎಂದು ಉತ್ತರಿಸುತ್ತಾರೆ. ಆರೋಪಿಗಳು ಚಾಸಾ-1 ರವರಿಗೆ ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಚಾಸಾ-1 ರವರು ಆಸ್ಪತ್ರೆಗೆ ಹೋಗಿ ದಾಖಲಾಗಿರುತ್ತಾರೆ ಎಂದರೆ ಸಾಕ್ಷಿ ಆಸ್ಪತ್ರೆಗೆ ನಂತರ ನಾವು ಹೋಗಿ ನೋಡಿರುತ್ತೇವೆ ಎಂದು ಉತ್ತರಿಸುತ್ತಾರೆ. ನಾನು ಗಲಾಟೆಯನ್ನು ಪ್ರತ್ಯಕ್ಷವಾಗಿ ನೋಡಿದ್ದು ಅದರಂತೆ ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯನ್ನು ನಿರಾಕರಿಸಿದ ಕಾರಣ ಅದನ್ನು ನಿಪಿ-**5** ಎಂದು ಗುರುತಿಸಲಾಯಿತು. ಪೋಲಿಸರಿಗೆ ನಿಪಿ-5 ಹೇಳಿಕೆ ನೀಡಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ .

<u>ಪಾಟೀ ಸವಾಲುಃ ಆರೋಪಿಗಳ ಪರವಾಗಿ ಶ್ರೀ ಆರ್ ವೈ ವಕೀಲರಿಂದಃ</u>

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸಿರುತ್ತಾರೆ.

ಮರು ವಿಚಾರಣೆ ಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **130/2023**

ಪಿ.ಡಬ್ಲ್ಯೂ-**4**
ಸಿ.ಡಬ್ಲ್ಯೂ-**5**

ಸಾಕ್ಷಿಗೆ ದಿನಾಂಕ **21.08.2025** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಓಂಕಾರಪ್ಪ

ತಂದೆಯ ಹೆಸರು : ಚಿತ್ರಪ್ಪ

ವಯಸ್ಸು : 49 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ನಾಗರಕಟ್ಟೆ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳು ನಮ್ಮ ಗ್ರಾಮಸ್ಥರು. ಚಾಸಾ-1 ರಿಂದ 4 ರವರ ಪರಿಚಯ ಇರುತ್ತದೆ.

ಮಳೆ ನೀರು ಸಂಗ್ರಹದ ವಿಷಯವಾಗಿ ಆರೋಪಿಗಳು ಮತ್ತು ಚಾಸಾ-1 ರವರ ನಡುವೆ ಸಂಜೆ 5 ಗಂಟೆ ನಂತರ ಜಗಳ ಆಗಿರುತ್ತದೆ. ನನಗೆ ದಿನಾಂಕ ಗೊತ್ತಿಲ್ಲ. ಜಗಳ ನಮ್ಮ ಮನೆಯ ಹಿಂದೆ ಆಗುತ್ತಿದ್ದು 10 ಅಡಿ ದೂರದಲ್ಲಿ ಆಗುತ್ತಿದ್ದು , ನಾನು ಜಗಳವನ್ನು ಪ್ರತ್ಯಕ್ಷವಾಗಿ ನೋಡಿರುತ್ತೇನೆ. 1 ನೇ ಆರೋಪಿ ಚಾಸಾ-1 ರವರಿಗೆ ಒಂದು ಕಲ್ಲಿನಿಂದ ತಲೆಗೆ ಹೊಡೆದಿರುತ್ತಾರೆ. ನಾನು ಜಗಳವನ್ನು ಬಿಡಿಸಲು ಹೋಗಿರುವುದಿಲ್ಲ. ಆರೋಪಿಗಳು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ. ನಾನು ಪೋಲಿಸರಿಗೆ ಹೇಳಿಕೆ ನೀಡಿದ್ದೇನೊ ಇಲ್ಲವೊ ಎಂದು ನೆನಪಿಲ್ಲ. ಸಾಕ್ಷಿ 1 ನೇ ಆರೋಪಿ ಚಾಸಾ-1 ರವರಿಗೆ ಹಲ್ಲೆ ಮಾಡಿರುತ್ತಾರೆ ಎಂದು ಹೇಳುವ ಕಲ್ಲನ್ನು ನೋಡಿ ಗುರುತಿಸುತ್ತಾರೆ. ಅದನ್ನು ಈಗಾಗಲೇ ಮುದ್ದೆ ಮಾಲು-1 ಎಂದು ಗುರುತಿಸಲಾಗಿದೆ.

**(**ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು**)**

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿಃ 01.09.2022 ರಂದು ರಾತ್ರಿ 7.00 ಗಂಟೆಗೆ ಗಲಾಟೆ ಆಗಿರುತ್ತದೆ ಎಂದರೆ ಸಾಕ್ಷಿ 5 ಗಂಟೆ ನಂತರ ಆಗಿರುತ್ತದೆ ಎಂದು ನುಡಿಯುತ್ತಾರೆ. ನಾನು ಜಗಳವನ್ನು ಪ್ರತ್ಯಕ್ಷವಾಗಿ ನೋಡಿದ್ದು , ಆರೋಪಿಗಳು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿರುತ್ತಾರೆ ಎಂದರೆ ಸರಿ. 2 ನೇ ಆರೋಪಿ ಚಾಸಾ-1 ರವರಿಗೆ ಕೈ ಕಾಲುಗಳಿಂದ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿ. ನಾನು ಮತ್ತು ಚಾಸಾ-4 ಗಲಾಟೆ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ . ಆರೋಪಿಗಳು ಚಾಸಾ-1 ರವರಿಗೆ ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ. ಚಾಸಾ-1 ರವರು ಆಸ್ಪತ್ರೆಗೆ ಹೋಗಿ ದಾಖಲಾಗಿರುತ್ತಾರೆ ಎಂದರೆ ಸರಿ . ಈಗ ಹೇಳಿದಂತೆ ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿ.

ಪಾಟೀ ಸವಾಲುಃ ಆರೋಪಿಗಳ ಪರವಾಗಿ ಶ್ರೀ ಆರ್ ವೈ ವಕೀಲರಿಂದಃ

ಗಲಾಟೆ ಆದ ದಿನಾಂಕ , ತಿಂಗಳು ಮತ್ತು ಇಸವಿ ನನಗೆ ಹೇಳಲು ಬರುವುದಿಲ್ಲ. ಗಲಾಟೆ ಆದ ಸಮಯದಲ್ಲಿ ಸುಮಾರು 7-8 ಜನ ಇದ್ದರು. ನಾನು ಸ್ಥಳದಿಂದ ಸುಮಾರು 10 ಅಡಿ ದೂರದಲ್ಲಿ ಇದ್ದೆನು . ಆದ ಕಾರಣ ಆರೋಪಿಗಳು ಮತ್ತು ಚಾಸಾ-1 ರವರ ನಡುವಿನ ಮಾತುಗಳು ನನಗೆ ಕೇಳಿಸುತ್ತಿರಲಿಲ್ಲ ಎಂದರೆ ಸರಿಯಲ್ಲ . ಸಾಕಷ್ಟು ಜನರು ಇದ್ದ ಕಾರಣ ಯಾರು ಯಾರಿಗೆ ಹೊಡೆದರು ಎಂದು ನಿರ್ದಿಷ್ಟವಾಗಿ ನನಗೆ ಹೇಳಲು ಬರುವುದಿಲ್ಲ ಎಂದರೆ ಸರಿಯಲ್ಲ . ಆರೋಪಿಗಳು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಿಲ್ಲ , ಹಲ್ಲೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ . ಚಾಸಾ-1 ಮತ್ತು ನಾವು ಒಂದೇ ಕುಲಸ್ಥರು ಎಂದರೆ ಸರಿ . ಯಾವುದೇ ರೀತಿಯ ಗಲಾಟೆ ಆಗದಿದ್ದರೂ ಚಾಸಾ-1 ರವರ ಮಾತನ್ನು ಕೇಳಿಕೊಂಡು ಆರೋಪಿಗಳ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ . ನಾನು ಠಾಣೆಗೆ ಹೋಗಿರುವುದಿಲ್ಲ . ಠಾಣೆಗೆ ಹೋಗಿ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಮುದ್ದೆ ಮಾಲು-1 ರಂತೆ ಇರುವ ಕಲ್ಲುಗಳು ಎಲ್ಲಾ ಕಡೆ ದೊರೆಯುತ್ತವೆ ಎಂದರೆ ಸರಿ . ಚಾಸಾ-1 ರವರ ಮಾತನ್ನು ಕೇಳಿಕೊಂಡು ಮುದ್ದೆ ಮಾಲು -1 ರ ಕಲ್ಲಿನಿಂದಲೇ ಹಲ್ಲೆ ಮಾಡಿರುತ್ತಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ .

ಮರು ವಿಚಾರಣೆ ಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,ಹೊಸದುರ್ಗ.